# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ ಟಮಕ, ಕೋಲಾರ-563 103


---

ಸಂಖ್ಯೆ: ಬೆಂ.ಉ.ವಿ./ಕು.ಸ.ಕಾ/ಸಂ.ನೀ/1444/2023-24 ದಿನಾಂಕ: 14.09.2023

**ಅಧಿಸೂಚನೆ**

**ವಿಷಯ:** 2023-24ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನೀಡುವ ಬಗ್ಗೆ.

**ಉಲ್ಲೇಖ:** 1. ಅಸಾಮಾನ್ಯ ವಿದ್ಯಾವಿಷಯಕ ಪರಿಷತ್ತು ಸಭೆಯ ನಡಾವಳಿ.ದಿನಾಂಕ:14.07.2023
2. ಅಸಾಮಾನ್ಯ ಸಿಂಡಿಕೇಟ್ ಸಭೆಯ ನಡಾವಳಿ ದಿನಾಂಕ: 15.07.2023
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:11.09.2023

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ **2000 ದ 59**ನೇ ಪ್ರಕರಣದ **17**ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಸಕ್ಷಮ ಪ್ರಾಧಿಕಾರಗಳ ಅನುಮೋದನೆಯೊಂದಿಗೆ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು, **2023-24** ನೇ ಶೈಕ್ಷಣಿಕ ಸಾಲಿಗೆ **ನಾಗರ್ಜುನ ಕಾಲೇಜ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್ ಚಿಕ್ಕಬಳ್ಳಾಪುರ ಇರುವ** ನಡೆಸುತ್ತಿರುವ ಕೆಳಕಂಡ ಕೋರ್ಸುಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನೀಡಿದೆ.

| ಕೋರ್ಸ್ | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಬಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |
| ಎಂ.ಸಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |

**ಷರತ್ತುಗಳು:**

1. ಪ್ರತಿ ಶೈಕ್ಷಣಿಕ ವರ್ಷದ ಎ.ಐ.ಸಿ.ಟಿ.ಇ ಯ ವಿಸ್ತರಣಾ ಅನುಮೋದನೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು.
2. ಎ.ಐ.ಸಿ.ಟಿ.ಇ, ನವದೆಹಲಿ, ಕರ್ನಾಟಕ ಸರ್ಕಾರ, ಹಾಗೂ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವಿಧಿಸಿರುವ / ವಿಧಿಸುವ ಷರತ್ತು ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
3. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದುದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯವು ಅಂಗೀಕಾರ ನೀಡುವುದಿಲ್ಲ.
4. ಯಾವುದೇ ಕೋರ್ಸಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿ ಇಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
5. ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಕರ್ನಾಟಕ ಎಂ.ಬಿ.ಎ. ಮತ್ತು ಎಂ.ಸಿ.ಎ ಕೋರ್ಸುಗಳ ಅಭ್ಯರ್ಥಿಗಳ ಆಯ್ಕೆ ನಿಯಮಗಳನ್ವಯ ಮಾತ್ರ ಪಡೆಯತಕ್ಕದ್ದು.
6. ಕಾಲೇಜು/ ಆಡಳಿತ ಶೇ.50ರಷ್ಟು ಸರ್ಕಾರ/ ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತ್ತಕ್ಕದ್ದು. ಕೋರ್ಸುಗಳಿಗೆ ನಿಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮಿರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

8. ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ:13–8–1997ರ ಸರ್ವೋಚ್ಚ ನ್ಯಾಯಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ , ಕೆಲಸ ನಿವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟುಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ(ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯವುದೇ ರೀತಿಯ ಕಿರುಕುಳ,ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ / ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.
9. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
10. ಕಾರ್ಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ. ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.
11. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.
12. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
13. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
14. 2024–25 ನೇ ಸಾಲಿಗೆ ಸದರಿ ಕೋರ್ಸಿನ ಸಂಯೋಜನಾ ನವೀಕರಣಕ್ಕಾಗಿ ಅರ್ಜಿಯನ್ನು ತಪ್ಪದೇ ಸಲ್ಲಿಸತಕ್ಕದ್ದು.
15. ***ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್ (NAAC/NBA) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.***
16. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.
17. ಪ್ರತಿ ಕಾಲೇಜು ಆಯಾ ಶೈಕ್ಷಣಿಕ ವರ್ಷದಲ್ಲಿ ಕನಿಷ್ಠ ಎರಡು ಆಡಳಿತ ಮಂಡಳಿ (Governing Council) ಸಭೆಗಳನ್ನು ಕಡ್ಡಾಯವಾಗಿ ನಡೆಸಿ ವರದಿಯನ್ನು ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.

**ಆದೇಶಾನುಸಾರ**

12/7

**ಕುಲಸಚಿವರು**

ಕುಲಸಚಿವರು
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ
ಟಮಕ, ಕೋಲಾರ, ಕರ್ನಾಟಕ–563 103.

**ಗೆ,**
**ಪ್ರಾಂಶುಪಾಲರು,**
**ನಾಗರ್ಜುನ ಕಾಲೇಜ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್ ಚಿಕ್ಕಮರಳಿ ಗ್ರಾಮ ನಂದಿ ಹೋಬಳಿ,**
**ಚಿಕ್ಕಬಳ್ಳಾಪುರ, ಚಿಕ್ಕಬಳ್ಳಾಪುರ ಜಿಲ್ಲೆ 562 101**

**ಪ್ರತಿಗಳು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು–1.
2. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
3. ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ –563 103.
4. ಕಛೇರಿ ಪ್ರತಿ.